RNU AIR DHARWAD

AUGUST 29, 2026

**AKASHAVANI - DHARWAD**

**PRADESH SAMACHARA (KANNADA) 12.00 P.M.**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

<><><>

**ರಾಜ್ಯದ ಜವಳಿ ಕ್ಷೇತ್ರದಲ್ಲಿ ಉದ್ಯೋಗ ಸೃಷ್ಟಿ ಹಾಗೂ** ರಫ್ತುದಾರರಿಗೆ ಅಗತ್ಯ ಮಾಹಿತಿ, ಮಾರ್ಗದರ್ಶನ ನೀಡಿ ರಫ್ತು ಸಾಮರ್ಥ್ಯ ಹೆಚ್ಚಿಸುವ ಉದ್ದೇಶದಿಂದ, ಉತ್ತರ ಕರ್ನಾಟಕದಲ್ಲಿ ಹಾಗೂ ದೊಡ್ಡಬಳ್ಳಾಪುರದಲ್ಲಿ ತಲಾ ಒಂದರಂತೆ, ಜವಳಿ ರಫ್ತು ಸೌಲಭ್ಯ ಕೇಂದ್ರ ಸ್ಥಾಪಿಸುವ ಪ್ರಸ್ತಾವನೆ, ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗಿದೆ ಎಂದು ಕೈಮಗ್ಗ ಮತ್ತು ಜವಳಿ ಇಲಾಖೆ ನಿರ್ದೇಶಕ ಎ.ಬಿ. ಬಸವರಾಜು ಹೇಳಿದರು. ಬೆಂಗಳೂರಿನಲ್ಲಿ ಆಯೋಜಿತ, 14 ದಿನಗಳ, ರಾಷ್ಟ್ರೀಯ ಕೈಮಗ್ಗ ಮೇಳ–2026 ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು, ರಾಜ್ಯದಲ್ಲಿ ಸುಮಾರು ಒಂದೂವರೆ ಲಕ್ಷ ನೇಕಾರರಿದ್ದಾರೆ. ಅರ್ಹ ನೇಕಾರರಿಗೆ ನೇಕಾರ ಸಮ್ಮಾನ್ ಯೋಜನೆಯಡಿ ವಾರ್ಷಿಕ ಐದು ಸಾವಿರ ರೂಪಾಯಿ ಆರ್ಥಿಕ ನೆರವು, ವಸತಿ ಸೌಲಭ್ಯ ಹಾಗೂ ವಿವಿಧ ಪ್ರೋತ್ಸಾಹಧನಗಳನ್ನು ನೀಡಲಾಗುತ್ತಿದೆ ಎಂದರು.

<><><>

**ರಾಜ್ಯದ 10 ಜಿಲ್ಲೆಗಳಲ್ಲಿ ಭೂ ದಾಖಲೆಗಳ** ಡಿಜಿಟಲೀಕರಣ ಕಾರ್ಯ ಪೂರ್ಣಗೊಂಡಿದೆ. ಉಳಿದ 21 ಜಿಲ್ಲೆಗಳಲ್ಲಿ ಈ ಕಾರ್ಯ ಮುಂದುವರಿದಿದೆ ಎಂದು ಉಪ ಮುಖ್ಯಮಂತ್ರಿ ಡಾಕ್ಟರ ಜಿ. ಪರಮೇಶ್ವರ ತಿಳಿಸಿದ್ದಾರೆ. ಎಕ್ಸ್ ಖಾತೆಯಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಪ್ರತಿದಿನ 9 ಸಾವಿರದ 600 ಪುಟಗಳ ಡಿಜಿಟಲೀಕರಣದ ಗುರಿ ನಿಗದಿಪಡಿಸಲಾಗಿದೆ. ಸೆಪ್ಟೆಂಬರ್ ಅಂತ್ಯದೊಳಗೆ ಪೂರ್ಣಗೊಳಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

<><><>

**ರಾಜ್ಯಾದ್ಯಂತ ಬಗರ ಹುಕುಂ ಅರ್ಜಿಗಳ** ವಿಲೇವಾರಿಯನ್ನು ತ್ವರಿತಗೊಳಿಸಲಾಗುತ್ತಿದೆ. ಅರ್ಜಿದಾರರಿಗೆ ಸಕಾಲಿಕ ನೆರವು ದೊರೆಯುವುದನ್ನು ಖಚಿತಪಡಿಸಿಕೊಳ್ಳಲು ಕ್ರಮ ಕೈಗೊಳ್ಳಲಾಗಿದೆ, ಎಂದು ಕಂದಾಯ ಖಾತೆ ಸಚಿವ ಹಾಗೂ ಉಪ ಮುಖ್ಯಮಂತ್ರಿ ಡಾಕ್ಟರ ಜಿ. ಪರಮೇಶ್ವರ ಸಾಮಾಜಿಕ ಜಾಲತಾಣ ಎಕ್ಸ್ ಖಾತೆ ಮೂಲಕ ತಿಳಿಸಿದ್ದಾರೆ. 24 ಸಾವಿರದ 684 ಅರ್ಜಿಗಳು ತಾಲೂಕು ಕಚೇರಿಗಳಲ್ಲಿದ್ದು, ತಹಶೀಲ್ದಾರರಿಗೆ ಮಾಸಿಕ ಗುರಿ ನಿಗದಿಪಡಿಸಿ, ಬಾಕಿ ಅರ್ಜಿಗಳನ್ನು ವಿಳಂಬವಿಲ್ಲದೆ ವಿಲೇವಾರಿ ಮಾಡುವಂತೆ ಸೂಚಿಸಲಾಗಿದೆ ಎಂದಿದ್ದಾರೆ.

<><><>

**ತುಮಕೂರು–ಚಿತ್ರದುರ್ಗ–ದಾವಣಗೆರೆ ಹೊಸ ರೈಲು** ಮಾರ್ಗ ಯೋಜನೆಯಡಿ, ತಿಮ್ಮರಾಜನಹಳ್ಳಿ–ತಾವರೆಕೆರೆ ನಡುವೆ, 41 ಕಿಲೋಮೀಟರ್ ಹೊಸ ರೈಲು ಮಾರ್ಗದ ಕಾಮಗಾರಿ ಪ್ರಗತಿಯಲ್ಲಿದೆ, 2028 ರ ಮಾರ್ಚ್ ತಿಂಗಳ ಒಳಗೆ ಪೂರ್ಣಗೊಳಿಸುವ ಗುರಿ ಹೊಂದಲಾಗಿದೆ ಎಂದು ರೇಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ತಿಳಿಸಿದರು. ಕಾಮಗಾರಿಯ ಯೋಜನೆಯನ್ನು ಪರಿಶೀಲಿಸಿದ ಅವರು, ಜೋಗಿಹಳ್ಳಿ ಹಾಗೂ ಚಿಕ್ಕನಹಳ್ಳಿ ರೈಲು ನಿಲ್ದಾಣಗಳಲ್ಲಿ ಎರಡು ಪ್ಲಾಟಫಾರ್ಮಗಳು ಹಾಗೂ ಪ್ರಯಾಣಿಕ ಮೂಲಸೌಕರ್ಯ ಸೌಲಭ್ಯಗಳನ್ನು ಕಲ್ಪಿಸಲಾಗುವುದು ಎಂದು ತಿಳಿಸಿದ್ದಾರೆ.

<><><>

**ಕರ್ನಾಟಕದ ಕ್ರೀಡಾ ಪ್ರತಿಭೆಗಳನ್ನು ಗುರುತಿಸಿ, ಜಾಗತಿಕ** ಮಟ್ಟಕ್ಕೆ ಬೆಳೆಸಲು ರಾಜ್ಯ ಸರ್ಕಾರ ನಿರಂತರವಾಗಿ ಶ್ರಮಿಸುತ್ತಿದೆ. ಗ್ರಾಮೀಣ ಮಟ್ಟದಿಂದಲೇ ಕ್ರೀಡಾಪಟುಗಳಿಗೆ ಸೂಕ್ತ ತರಬೇತಿ, ಸುಧಾರಿತ ಕ್ರೀಡಾ ಮೂಲಸೌಕರ್ಯ ಒದಗಿಸಲಾಗುತ್ತಿದೆ ಎಂದು ಮುಖ್ಯಮಂತ್ರಿ ಡಿ.ಕೆ ಶಿವಕುಮಾರ ತಿಳಿಸಿದ್ದಾರೆ. ಎಕ್ಸ್ ಖಾತೆಯಲ್ಲಿ ಹಾಕಿ ಮಾಂತ್ರಿಕ, ಮೇಜರ್ ಧ್ಯಾನ ಚಂದ್ ಜನ್ಮದಿನ– ರಾಷ್ಟ್ರೀಯ ಕ್ರೀಡಾ ದಿನಾಚರಣೆ ಶುಭಾಶಯಗಳನ್ನು ತಿಳಿಸಿರುವ ಅವರು, ರಾಜ್ಯ ಸರ್ಕಾರ, ಅಂತಾರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡಿದ ಕ್ರೀಡಾಪಟುಗಳಿಗೆ ನಗದು ಪುರಸ್ಕಾರ ಹಾಗೂ ಸರ್ಕಾರಿ ಉದ್ಯೋಗಗಳಲ್ಲಿ ಕ್ರೀಡಾ ಮೀಸಲಾತಿ ಕಲ್ಪಿಸುತ್ತಿದೆ ಎಂದರು.

<><><>

**ವಿಬಿ ಜಿ ರಾಮ್‌ಜಿ ಯೋಜನೆಯ ಅಡಿಯಲ್ಲಿ ನೋಂದಣಿಯಾಗದ** ಕೂಲಿಕಾರರು ಗ್ರಾಮ ಪಂಚಾಯಿತಿಗೆ ಅಗತ್ಯ ದಾಖಲೆಗಳನ್ನು ಸಲ್ಲಿಸಿ ಹೊಸ ಜಾಬ್ ಕಾರ್ಡ್ ಪಡೆದುಕೊಳ್ಳುವಂತೆ ಗದಗ ತಾಲೂಕಾ ಪಂಚಾಯತ ನಿರ್ದೇಶಕ ಕುಮಾರ ಪೂಜಾರ ತಿಳಿಸಿದ್ದಾರೆ.

<><><>

**ಉತ್ತರ ಕನ್ನಡ ಜಿಲ್ಲೆಯ ಎಲ್ಲ ವಿಧಾನಸಭಾ** ಕ್ಷೇತ್ರಗಳಲ್ಲಿ, ಇಂದು ಮತ್ತು ನಾಳೆ ಹಾಗೂ ಸೆಪ್ಟೆಂಬರ್ ತಿಂಗಳ 19 ಮತ್ತು 20 ರಂದು, ಮತದಾರರ ಪಟ್ಟಿ ಪರಿಷ್ಕರಣೆ ಸಂಬಂಧಪಟ್ಟಂತೆ ವಿಶೇಷ ಆಂದೋಲನ ಆಯೋಜಿಸಲಾಗಿದೆ. ಮತದಾರರು ತಮ್ಮ ವ್ಯಾಪ್ತಿಯ ಮತಗಟ್ಟೆ ಅಧಿಕಾರಿಗಳನ್ನು ನೇರವಾಗಿ ಭೇಟಿ ಮಾಡಿ, ಹಕ್ಕು ಮತ್ತು ಆಕ್ಷೇಪಣೆಗಳನ್ನು ಸಲ್ಲಿಸಬಹುದು ಎಂದು ಜಿಲ್ಲಾಧಿಕಾರಿ ಕೆ. ಲಕ್ಷ್ಮೀಪ್ರಿಯಾ ತಿಳಿಸಿದ್ದಾರೆ. ಹೆಸರು ತಿದ್ದುಪಡಿ, ಹೊಸ ಹೆಸರು ಸೇರ್ಪಡೆ, ವಿಳಾಸ ಬದಲಾವಣೆಗೆ ಸೇರಿದ ಅರ್ಜಿ ನಮೂನೆಗಳನ್ನು ನೀಡಬಹುದು ಎಂದು ತಿಳಿಸಿದ್ದಾರೆ.

<><><>

**ಧಾರವಾಡದಲ್ಲಿ ಆಯೋಜಿತ, ಶಿವಶರಣ** ನುಲಿಯ ಚಂದಯ್ಯ ಜಯಂತಿ ಕಾರ್ಯಕ್ರಮವನ್ನು, ಮಾಜಿ ಸಂಸದ ಐ.ಜಿ ಸನದಿ ಉದ್ಘಾಟಿಸಿದರು. ಶರಣರ ಜೀವನ ಹಾಗೂ ವಚನಗಳನ್ನು ಅಧ್ಯಯನ ಮಾಡುವ ಮೂಲಕ ಅವರ ಆದರ್ಶಗಳನ್ನು ಬದುಕಿನಲ್ಲಿ ಅಳವಡಿಸಿಕೊಳ್ಳುವಂತೆ ಕರೆ ನೀಡಿದರು.

<><><>

**ಆಕಾಶವಾಣಿಯ ಬಹುಶ್ರುತ 'ಮನ್ ಕಿ ಬಾತ್' ಕಾರ್ಯಕ್ರಮದ** 137 ನೇ ಆವೃತ್ತಿ, ನಾಳೆ, ಭಾನುವಾರ ಬೆಳಗ್ಗೆ 11 ಗಂಟೆಗೆ ಪ್ರಸಾರವಾಗಲಿದೆ. ಪ್ರಧಾನಮಂತ್ರಿ ನರೇಂದ್ರ ಮೋದಿ, ದೇಶ, ವಿದೇಶಗಳಲ್ಲಿರುವ ಭಾರತೀಯರನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಮನದ ಮಾತು ಬಾನುಲಿ ಕಾರ್ಯಕ್ರಮವು ಆಕಾಶವಾಣಿ, ನ್ಯೂಸ್ ಆನ್ ಏರ್ ಅಪ್ಲಿಕೇಶನ್, ದೂರದರ್ಶನ ವಾಹಿನಿಗಳಲ್ಲಿ ಏಕಕಾಲದಲ್ಲಿ ಪ್ರಸಾರವಾಗಲಿದೆ.

<><><>

**ಮಾಜಿ ಮುಖ್ಯಮಂತ್ರಿ ರಾಮಕೃಷ್ಣ ಹೆಗಡೆಯವರ** ಜನ್ಮ ಶತಮಾನೋತ್ಸವ ಆಚರಣೆ ಕಾರ್ಯಕ್ರಮ, ಈ ಮಧ್ಯಾಹ್ನ 2.45 ಕ್ಕೆ ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಆಯೋಜಿತವಾಗಿದೆ. ಉಪ ರಾಷ್ಟ್ರಪತಿ ಸಿ.ಪಿ ರಾಧಾಕೃಷ್ಣನ್ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

<><><>

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ**

<><><>